**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -3469/2021**
**ಚಾಸಾ - 05** / ಪ್ರಾಸಾ - 05

| | |
|---|---|
| ಹೆಸರು | **ಕಿರ್ತನ್** |
| ತಂದೆಯ ಹೆಸರು | **ವೆಂಕಟೇಶ್** |
| ವಯಸ್ಸು | **24** |
| ಉದ್ಯೋಗ | **ಚಾಲಕ** |
| ವಿಳಾಸ | **ಮಾದಪಟ್ಟಣ** |

**ದಿನಾಂಕ: 26-09-2025ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ಈಗ ಸಾಕ್ಷಿಗೆ ನೋಟಿಸ್ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ನೋಟಿಸ್ ನ್ನು ನಿಪಿ-10 ಎಂದು ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ನಿಪಿ-4ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಸುಮಾರು 2 ವರ್ಷಗಳ ಹಿಂದೆ ನಾನು ತಾವರೆಕೆರೆ ಪೋ. ಠಾಣೆಗೆ ಹೋಗಿದ್ದಾಗ ಪೋಲೀಸರು ನನ್ನಿಂದ ಕೆಲವು ಖಾಲಿ ಹಾಳೆಗಳ ಮೇಲೆ ಸಹಿಯನ್ನು ಪಡೆದುಕೊಂಡರು. ನಿಪಿ-4 ಮತ್ತು 10 ಕ್ಕೆ ನನ್ನ ಜೊತೆ ಯಾರು ಸಹಿಯನ್ನು ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-4 ಮತು 10ರಲ್ಲಿ ಇರುವ ವಿಷಯದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ವಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ವಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.19-09-2021ರಂದು ಪಂಚನಾಮೆಗೆ ಸಹಕರಿಸುವಂತೆ ಹೇಳಿ ಪೋಲೀಸರು ನಿಪಿ-10 ರಂತೆ ನಿಮಗೆ ಮತ್ತು ಚಾಸಾ-6 ರವರಿಗೆ ನೋಟಿಸ್ ನ್ನು ನೀಡಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಅದೇ ದಿನ ಬೆಳಗ್ಗೆ 8.00 ರಿಂದ 8.45 ಗಂಟೆ ಸಮಯದಲ್ಲಿ ಚಾಸಾ-1ರವರು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-4ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ ಮತ್ತು ಚಾಸಾ-6ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಯ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಾಟೀ **ಸವಾಲು:-ಆರೋಪಿಯ ಪರ ಶ್ರೀ.ಜಿ. ಹೆಚ್. ಎಂ , ವಕೀಲರಿಂದ:-**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**